# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:02.07.2022 ರ ಶನಿವಾರ ರಂದು ಮಧ್ಯಾಹ್ನ:11.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್ ವ್ಯಾಕ್ಸಿನ್ ಲಸಿಕೆಗಳನ್ನು ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವ ಬಗ್ಗೆ.
2. ಕುಡಿಯುವ ನೀರು ಸರಬರಾಜು ಬಗ್ಗೆ,
3. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
4. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
5. ಬೀದಿ ದೀಪಗಳ ನಿರ್ವಹಣೆಯ ಬಗ್ಗೆ,
6. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ,

**ವಾರ್ಡ್ ನಂ-192 ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಸೂಚಿಸಿರುವವರ ವಿವರ**

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಎಸ್,ರಾಜೇಶ್ | ಬೆಸ್ಕಾಂ. ಸ.ಅ. | ಹಾಜರಾಗಿರುತ್ತಾರೆ |
| 4 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 5 | ಶ್ರೀ.ರಮೇಶ್.ಪಿ | ದ್ವಿ.ದ.ಸ. | ಹಾಜರಾಗಿರುತ್ತಾರೆ |
| 6 | ಶ್ರೀ.ಬಿ.ಅಚ್ಯುತ್ ರಾವ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 7 | ಶ್ರೀ.ಜಯಪ್ರಕಾಶ್.ಹೆಚ್.ವಿ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 8 | ಶ್ರೀ.ಬಿ.ಜಿ.ಸಂಪತ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 9 | ಶ್ರೀ.ವಿನೋದ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 10 | ಆಶಾ ನಾಯಕ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |

CamScanner

| | | | |
|---|---|---|---|
| 11 | ಶ್ರೀ.ರಾಘವೇಂದ್ರ.ಕೆ.ಟಿ. | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 12 | ಶ್ರೀ.ಹನುಮಂತಪ್ಪ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 13 | ಶ್ರೀ.ಎಸ್.ಅಂಜಾದ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 14 | ಶ್ರೀ.ಹಿದಾವತ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 15 | ಶ್ರೀ.ಅಕ್ರಮ್ ಪಾಷ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 16 | ಶ್ರೀ.ಚಾನ್ ಪಾಷ | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 17 | ಶ್ರೀ.ಸಲೀಮ್ | ಸಾರ್ವಜನಿಕರು | ಹಾಜರಾಗಿರುತ್ತಾರೆ |

## ಸಭೆಯ ನಡಾವಳಿಗಳು

1. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕೋವಿಡ್-19 ಮಹಾಮಾರಿ ಸಾಂಕ್ರಾಮಿಕ ರೋಗ ಹರಡದಂತೆ ಸಾರ್ವಜನಿಕರಿಗೆ ಕೋವಿಡ್ ಬೂಸ್ಟರ್ ವ್ಯಾಕ್ಸಿನ್ ಚುಚ್ಚುಮದ್ದು ನೀಡಲು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿದರು.

2. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಬರುವ ನೋಬೋ ರೆಸಿಡೆನ್ಸಿ, ಮೀನಾಕ್ಷಿ ಬಡಾವಣೆ, ಸುಭಾಷ್‌ನಗರ ಮತ್ತು ನಂದಿ ವುಡ್ಸ್ ಅಪಾರ್ಟ್‌ಮೆಂಟ್ ಎದುರು ಇರುವ ಪ್ರದೇಶದಲ್ಲಿ ಬೀದಿ ದೀಪಗಳು ಹಾಳಾಗಿರುವುದಾಗಿ ಹಾಗೂ ನೂತನವಾಗಿ ಬೀದಿ ದೀಪಗಳನ್ನು ಅಳವಡಿಸಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ರವರಿಗೆ ಬೆಸ್ಕಾಂ ಸಂಸ್ಥೆಯ ಗಮನಕ್ಕೆ ತರಲು ಸೂಚಿಸಿದರು.

ಕ್ರಮ: ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು ವಾರ್ಡ್ ನಂ-192

3. ಸದರಿ ವಾರ್ಡ್‌ನ ವಿಶ್ವಪ್ರಿಯಾ ಬಡಾವಣೆಯ ಟ್ರಾನ್ಸ್ ಫಾರ್ಮರ್‌ಗಳು ಕೆಳಮಟ್ಟದಲ್ಲಿದ್ದು ಇದರಿಂದ ಸಾರ್ವಜನಿಕರಿಗೆ ಮತ್ತು ಮಕ್ಕಳಿಗೆ ತುಂಬಾ ತೊಂದರೆಯಾಗುವ ಸಂಭವವಿರುತ್ತದೆ. ಆದುದರಿಂದ ಇದನ್ನು ಸರಿಪಡಿಸಿ ಕೊಡಲು ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ರವರಿಗೆ ಬೆಸ್ಕಾಂ ಸಂಸ್ಥೆಯ ಗಮನಕ್ಕೆ ತರಲು ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

4. ಸದರಿ ವಾರ್ಡ್‌ನ ವಿಶ್ವಪ್ರಿಯಾ ಬಡಾವಣೆಯ ಮುಖ್ಯರಸ್ತೆಯಲ್ಲಿ ವಾಹನ ನಿಲುಗಡೆ ನಿಷೇಧದ ನಾಮ ಫಲಕಗಳನ್ನು ಅಳವಡಿಸಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

CamScanner

5. ಸದರಿ ವಾರ್ಡ್‌ನ ಮೀನಾಕ್ಷೀ ಬಡಾವಣೆಯಲ್ಲಿ ಸಿ.ಸಿ. ಟಿವಿ ಕ್ಯಾಮರಾಗಳನ್ನು ಅಳವಡಿಸಲು ಇದರಿಂದ ಕಳ್ಳತನ ಕಡಿಮೆಯಾಗುವುದು ಹಾಗೂ ಮಹಿಳೆಯರ ರಕ್ಷಣೆಯಾಗುವುದು ಎಂದು ಸಾರ್ವಜನಿಕರು ಮನವಿ ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

6. ಸದರಿ ವಾರ್ಡ್‌ನ ಮೀನಾಕ್ಷಿ ಬಡಾವಣೆಯಲ್ಲಿ ಡಾಂಬರೀಕರಣದ ಕಾಮಗಾರಿಯನ್ನು ಶೀಘ್ರವಾಗಿ ಮುಕ್ತಾಯಗೊಳಿಸಿಕೊಡಬೇಕೆಂದು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

7. ಸದರಿ ವಾರ್ಡ್ ವ್ಯಾಪ್ತಿಯ ಸುಭಾಷ್‌ನಗರದ ಅಯ್ಯಪ್ಪ ದೇವಸ್ಥಾನದ ರಸ್ತೆಯು ಹಾಳಾಗಿದ್ದು ನೂತನವಾಗಿ ರಸ್ತೆಯನ್ನು ನಿರ್ಮಿಸಿಕೊಡಬೇಕೆಂದು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

8. ಸದರಿ ವಾರ್ಡ್ ವ್ಯಾಪ್ತಿಯ ನೊಬೋ ರೆಸಿಡೆನ್ಸಿ ಪ್ರದೇಶದ ರಸ್ತೆಗಳಲ್ಲಿ ಗುಂಡಿ ಬಿದ್ದಿದ್ದು ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿದ್ದು ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಿಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ:ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

9. ಸದರಿ ವಾರ್ಡ್ ವ್ಯಾಪ್ತಿಯ ಸುಭಾಷ್ ನಗರದ ಪ್ರದೇಶಗಳಲ್ಲಿ ಕಸದ ವಾಹನ ಸರಿಯಾದ ಸಮಯಕ್ಕೆ ಬರುತ್ತಿಲ್ಲವೆಂದು ಇದರಿಂದಾಗಿ ಕಸದ ಸಮಸ್ಯೆಯಿರುವುದಾಗಿ ಇದರಿಂದ ಮಕ್ಕಳ ಆರೋಗ್ಯದ ಮೇಲೆ ಗಂಬೀರಿ ಪರಿಣಾಮ ಉಂಟಾಗುವುದರಿಂದ ಕೂಡಲೇ ಸಮಸ್ಯೆಯನ್ನು ಪರಿಹಿಸಿಕೊಡಲು ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಈ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

CamScanner

10. ಸದರಿ ವಾರ್ಡ್ ವ್ಯಾಪ್ತಿಯ ಪಟೇಲ್ ಬಡಾವಣೆಯಲ್ಲಿ ರಾಜಕಾಲುವೆಯು ಅರ್ಧಕ್ಕೆ ನಿರ್ಮಾಣ ವಾಗಿರುವುದಾಗಿ ಸಾರ್ವಜನಿಕರಿಗೆ ಇದರಿಂದ ಮಳೆಗಾಲದಲ್ಲಿ ಪ್ರವಾಹ ಉಂಟಾಗುವ ಬೀತಿಯಿರುವುದಾಗಿ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರು ದೂರು ಸಲ್ಲಿಸಿದರು. ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಈ ಕೂಡಲೇ ರಾಜಕಾಲುವೆ ಇಲಾಖೆಗೆ ಪತ್ರ ವ್ಯವಹಾರ ಮಾಡಲು ಸೂಚಿಸಿದರು.

ಕ್ರಮ: ವಾರ್ಡ್‌ನ ಸಹಾಯಕ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ-192 ಬೇಗೂರು

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

ಪ್ರತಿಗಳು:-

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ

CamScanner